# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ/ವಾರ್ಡ್ ಸಮಿತಿ ಸಹಾಯಕಅಭಿಯಂತರರಕಛೇರಿ ವಾರ್ಡ್ ಸಂಖ್ಯೆ: 136 ಜೆ.ಜೆ.ಆರ್ ನಗರ ಬೆಂಗಳೂರು

ಸಂಖ್ಯೆ: w-136/Committee/Proceding -22/2021-22 dt. 04-09-2021

## ಸಭೆಯ ನಡವಳಿಗಳು

ಶ್ರೀ ಸತೀಶ್ ಕುಮಾರ್ ಸಮಿತಿಯ ಕಾರ್ಯದರ್ಶಿಗಳು ಸಭೆಯನ್ನು ನಡೆಸುತ್ತಾ ಸಭೆಯಲ್ಲಿ ಉಪಸ್ಥಿತಗೊಂಡಿರುವ ಮಾನ್ಯ ನೋಡಲ್ ಅಧಿಕಾರಿಗಳಿಗೆ ಮತ್ತು ಉನ್ನತ ಸಭೆಯಲ್ಲಿ ಅಗಮಿಸಿರುವ ಎಲ್ಲಾ ಅಧಿಕಾರಿಗಳಿಗೆ ಸಭೆಗೆ ಸ್ವಾಗತಕೋರಿದರು. ನಂತರ ಮಾನ್ಯ ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು

## ಸಭೆಯಲ್ಲಿಚರ್ಚಿಸಲಾದ ವಿಷಯಗಳು

ಮೊದಲಿಗೆ ಈ ಹಿಂದಿನ ಸಭೆಯಲ್ಲಿ ಚರ್ಚಿಸಲಾದ ವಿಷಯಗಳ ಬಗ್ಗೆ ಗಮನಹರಿಸುತ್ತಾ ಹಾಗೂ ಸಾರ್ವಜನಿಕರಿಂದ ಬಂದ ದೂರುಗಳನ್ನು ಪರಿಹರಿಸಿದ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು.

ಸಹಾಯಕ ಕಾರ್ಯನಿರ್ವಹಕ ಅಧಿಕಾರಿಗಳ ಪ್ರತಿನಿಧಿ ಹಾಗೂ ಕೆಲಸ ಪರಿವೀಕ್ಷಕರು ದೂರು ಪುಸ್ತಕವನ್ನು ಸಭೆಯಲ್ಲಿ ನೀಡಿ ಸಾರ್ವಜನಿಕರಿಂದ ಬಂದ ದೂರುಗಳ ಪಟ್ಟಿ ಮತ್ತು ದೂರುಗಳನ್ನು ಪರಿಹರಿಸಿದ ದಿನಾಂಕ ಮತ್ತು ವಿವರಗಳನ್ನು ಸಭೆಯಲ್ಲಿ ಮಂಡಿಸಿದರು.

ಕಳೆದ ಸಭೆಯಲ್ಲಿ ವಾಡ್ ವ್ಯಾಪ್ತಿಯಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚುವಂತೆ ಸಭಾಧ್ಯಕ್ಷರು ಸೂಚಿಸಿರುವಂತೆ ಹಾಗೂ ಮಾನ್ಯ ಆಯುಕ್ತರ ಆದೇಶದಂತೆ ವಾರ್ಡ್ ವ್ಯಾಪ್ತಿಯ ಹೊಸಹಳ್ಳಿ ಮುಖ್ಯ ರಸ್ತೆ, ಮತ್ತು ಜೆ.ಜೆ.ಆರ್ ನಗರ ಮುಖ್ಯ ರಸ್ತೆಗಳಲ್ಲಿ ರಸ್ತೆ ಗುಂಡಿಯುನ್ನು ಮುಚ್ಚಿಸಿದ್ದು ಮುಂದನ ದಿನಗಳಲ್ಲಿ ಇತರೆ ಪ್ರದೇಶಗಳಲ್ಲಿ ಗುಂಡಿ ಮುಚ್ಚುಸುವುದಾಗಿ ಸಭೇಯಲ್ಲಿ ತಿಳಿಸಿದರು

ಸಭೆಯಲ್ಲಿ ಸದಸ್ಯರು ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಸರಿಯಾದ ರೀತಿಯಲ್ಲಿ ನಡೆಯುತ್ತಿರುವುದಿಲ್ಲ ಹಾಗೂ ಸ್ವಚ್ಛತೆಯ ಬಗ್ಗೆ ಸಾರ್ವಜನಿಕ ರಿಂದ ಹಲವು ದೂರುಗಳು ಕೇಳಿ ಬರುತ್ತಿದ್ದು ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಗುತ್ತಿಗೆ ಪಡೆದಿರುವ ಗುತ್ತಿಗೆದಾರರು ಸರಿಯಾದ ರೀತಿಯಲ್ಲಿ ಕಾರ್ಯ ನಿರ್ವಹಿಸದಿರುವ ಬಗ್ಗೆ ಸಭೆಯಲ್ಲಿ ಪ್ರಾಸ್ತಪಿಸಿದರು ಹಾಗೂ ಗುತ್ತಿಗೆದಾರನಿಗೆ ಸರಿಯಾಗಿ ಕಾರ್ಯನಿರ್ವಹಿಸುವಂತೆ ತಾಕಿತು ಮಾಡಲು ಸಭೇಯಲ್ಲಿ ವಿಷಯ ಪ್ರಾಸ್ತಪ ಮಾಡಿದರು.

---2

ಮಾನ್ಯ ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆಯ ಬಗ್ಗೆ ಸಭೆಯಲ್ಲಿ ವಿವರಣೆ ನೀಡುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದರು.

ಚಾಮರಾಜಪೇಟೆ ವಿಭಾಗ(ಘ.ತ್ಯಾ.ನಿ)ಯ ಸಹಾಯದ ಕಾರ್ಯಪಾಲಕ ಅಭಿಯಂತರರು. ಸಭೆಗೆ ಗೈರಗಿರುತ್ತಾರೆ

ಕಿರಿಯ ಆರೋಗ್ಯ ಪರಿವೀಕ್ಷರು ವಾರ್ಡ್ -136ರ ವ್ಯಾಪ್ತಿಯಲ್ಲಿ ಬರುವ ಬಿ.ಬಿ.ಎಂ.ಪಿ ಪೌರ ಕಾರ್ಮಿಕರು ಮತ್ತು ಗುತ್ತಿಗೆ ಪೌರ ಕಾರ್ಮಿಕರ ಹಾಜರಾತಿ ಪುಸ್ತಕ ಮತ್ತು ವಾಹನಗಳ ಹಾಜರಾತಿ ಪುಸ್ತಕವನ್ನು ಸಭೆಯಲ್ಲಿ ನೀಡಿದರು ಹಾಗೂ ಇತ್ತಿಚಿಗೆ ಬಂದ ದೂರುಗಳ ವಿವರ ಹಾಗೂ ಕೈಗೊಂಡ ಕ್ರಮಗಳ ಬಗ್ಗೆ ಸಭೆಯಲ್ಲಿ ವಿವರಣೆ ನೀಡಿದರು

ಅಧ್ಯಕ್ಷರು ಪ್ರತಿ ನಿತ್ಯ ಬಿ.ಬಿ.ಎಂ.ಪಿ ಪೌರ ಕಾರ್ಮಿಕರು ಮತ್ತು ಗುತ್ತಿಗೆ ಪೌರ ಕಾರ್ಮಿಕರ ಹಾಜರಾತಿ ಪುಸ್ತಕ ಮತ್ತು ವಾಹನಗಳ ಹಾಜರಾತಿಯ ವಿವರವನ್ನು ನೀಡುವಂತೆ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು ಡಬ್ಲೂಎಸ್ಎಸ್‌ಬಿ ಕಛೇರಿಗೆ ವಾರ್ಡ್ 136 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ  ಕೈಗೊಂಡಿರುವ ಬಗ್ಗೆ ತಿಳಿಸುವಂತೆ ಸಭೆಯಲ್ಲಿ ತಿಳಿಸಿದರು

ಬಿಡಬ್ಲೂಎಸ್ಎಸ್‌ಬಿ ಆಧಿಕಾರಿಗಳು ವಾರ್ಡ್ 136 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ  ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು ಮತ್ತು ಸಾರ್ವಜನಿಕರಿಗೆ ತೊಂದರೆಯಾಗದಂತೆ  ಕುಡಿಯುವ ನೀರು ಮತ್ತು ಒಳಚರಂಡಿ ವ್ಯವಸ್ಥೆಯನ್ನು ಮಾಡುವುದಾಗಿ ತಿಳಿಸಿದರು..

ಮಾನ್ಯ ಅಧ್ಯಕ್ಷರು ಜೆ.ಜೆ.ಆರ್ ನಗರ ಪೋಲೀಸ್ ಠಾಣೆಯಲ್ಲಿ ಮುಖಗವಚ ಧರಿಸದೇ ಓಡಡುವರಿಗೆ ವಿಧಿಸಿದ ದಂಡದ ವಿವರವನ್ನು  ಸಭೆಯಲ್ಲಿ ನೀಡುವಂತೆ ಕೋರಿದರು.

ಜೆ.ಜೆ.ಆರ್ ನಗರ ಪೋಲೀಸ್ ಠಾಣಾ ಪ್ರತಿ ನಿಧಿಯು ದಿನ ನಿತ್ಯ ಹೊಸಹಳ್ಳಿ ಮುಖ್ಯ ರಸ್ತೆ ಮತ್ತು ಇತರೆ ಮುಖ್ಯ ರಸ್ತೆಯಲ್ಲಿ ಮುಖಗವಚವಿಲ್ಲದೆ ತಿರುಗುವವರನ್ನು ಗುರ್ತಿಸಿ ಸ್ಥಳದಲ್ಲಿಯೆ ದಂಡ ವಿಧಿಸಲಾಗುತ್ತಿದೆ ಎಂದು ಸಭೆಯಲ್ಲಿ ತಿಳಿಸಿದರು

--- 3

ಮಾನ್ಯ ಅಧ್ಯಕ್ಷರು ಕಂದಾಯ ಪರಿವೀಕ್ಷಕರನ್ನು ಮತದಾರರ ಗುರ್ತಿನ ಚೀಟಿ ವಿತರಣೆ ಹಾಗೂ ಮತದಾನದ ಪಟ್ಟಿ ಪರಿಕ್ಷರಣೆಯ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು

ಕಂದಾಯ ಅಧಿಕಾರಿಗಳು ಸಭೆಯಲ್ಲಿ ಮತದಾರರ ಕರಡು ಪಟ್ಟಿ ತಯಾರಾಗಿದ್ದು ಅದನ್ನು ಪ್ರದರ್ಶಿಸಿದ ಮೇಲೆ ಅಂತಿಮ ಪಟ್ಟಿ ಪ್ರಕಟಿಸಿ ಗುರ್ತಿನ ಚೀಟಿಯನ್ನು ಸಾರ್ವಜನಿಕರಿಗೆ ನೀಡಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

ಮಾನ್ಯ ಅಧ್ಯಕ್ಷರು ಕಂದಾಯ ಪರಿವೀಕ್ಷಕರನ್ನು ಅಗಸ್ಟ್ ತಿಂಗಳಿನಲ್ಲಿ ಒಟ್ಟು ವಸೂಲತಿಯಾದ ಮೊತ್ತದ ವಿವರಣೆಯನ್ನು ಕೋರಿದರು.

ಕಂದಾಯ ಪರಿವೀಕ್ಷಕರು ಸಭೆಯಲ್ಲಿ ವಿವರಣೆ ನೀಡಿದರು.

ಮಾನ್ಯ ಅಧ್ಯಕ್ಷರು ಕೋವಿಡ್-19 ಆರೋಗ್ಯ ಇಲಾಖೆಯವರಿಗೆ ಕೋವಿಡ್-19 3ನೇ ಅಲೆಯ ಬಗ್ಗೆ ಕೈಗೊಂಡ ಕ್ರಮಗಳ ಸಭೆಯಲ್ಲಿ ವಿವರಣೆ ಕೋರಿದರು

ಆರೋಗ್ಯ ವೈದ್ಯಾಧಿಕಾರಿಗಳ ಪ್ರತಿನಿಧಿಯು ಕೋವಿಡ್-19 3ನೇ ಅಲೆಯಿಂದ ಕೋವಿಡ್-19 ಟೆಸ್ಟ್‌ಗಳನ್ನು ಹೆಚ್ಚಿಸಿದ್ದು ಹಾಗೂ ಆಶಾ ಕಾರ್ಯಕರ್ತೆಯರು ಪ್ರತಿ ಮನೆಗೆ ಹೋಗಿ ಪ್ರತಿಯೋಬ್ಬರ ಆರೋಗ್ಯ ವಿಚಾರಿಸಿ ಕೋವಿಡ್-19 ಸೊಂಕು ಕಾಣಿಸಿದವರಿಗೆ ವೈದ್ಯರುಗಳ ಸೂಚಿಸಿದಂತೆ ಹೋಮ್ ಕ್ವರಂಟೈನ್, ಅಸ್ಪತ್ರೆಗೆ ಚಿಕಿತ್ಸೆಗೆ ಶೀಫಾರಸ್ಸು ಮಾಡುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು.

ವಾರ್ಡ್ ವ್ಯಾಪ್ತಿಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಲಸಿಕೆ ನೀಡುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು.

ಸಂಚಾರಿ ಪೊಲೀಸ್ ಅಧಿಕಾರಿಗಳು ಮುಖ್ಯ ರಸ್ತೆಗಳಲ್ಲಿ ಗುಂಡಿ ಮುಚ್ಚ ವಾಹನ ಸಂಚಾರರಿಗೆ ಅನುಕೂಲ ಮಾಡಿಕೊಡಬೇಕೆಂದು ಸಭೆಯಲ್ಲಿ ತಿಳಿಸಿದರು.

ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ಈಗಾಗಲೇ ರಸ್ತೆ ಗುಂಡಿಗಳನ್ನು ಮುಚ್ಚಿದ್ದು ಮಳೆ ಕಾರಣದಿಂದ ಇನ್ನು ಕೆಲವು ಸ್ಥಳಗಳಲ್ಲಿ ಗುಂಡಿ ಮುಚ್ಚಲು ಸಾಧ್ಯವಾಗಿರುವುದಿಲ್ಲ, ಮುಂದಿನ ದಿನಗಳಲ್ಲಿ ವಾಡ್-136 ಗುಂಡಿ ಮುಕ್ತವಾಗುವುದೆಂದು ಸಭೆಯಲ್ಲಿ ತಿಳಿಸಿದರು.

ಇಂದಿನ ಸಭೆಯಲ್ಲಿ ಚರ್ಚಿಸಿದ ಹಾಗೂ ನಿರ್ಣಯಗಳನ್ನು ಕಾರ್ಯದರ್ಶಿ ಮತ್ತು ಸಂಚಾಲಕರು. ಸಭೆಯ ನಡಾವಳಿಗಳ ಪುಸ್ತಕದಲ್ಲಿ ದಾಖಲಿಸಿದರು. ವಂದನಾರ್ಪಣೆ ಮಾಡುವುದರ ಮೂಲಕ ಇಂದಿನ ಸಭೆಯನ್ನು ಮುಕ್ತಾಯಗೊಳಿಸಿದರು.

| ಕ್ರಮ ಸಂಖ್ಯೆ | ವಾರ್ಡ್ ಹಂತದ ಸಮಿತಿ ಹಾಗೂ ಸದಸ್ಯರುಗಳ ಹೆಸರು ಮೊಬೈಲ್ ಸಂಖ್ಯೆ | | ಸಹಿ |
|---|---|---|---|
| 1 | ಡಾ|| ಅಲ್ಲಮಪ್ರಭು, ದೂ. 9480685654<br>ಸಹಾಯಕ ನಿರ್ದೇಶಕರು (ಪಶುಪಾಲನೆ ಪಶ್ಚಿಮ) ಬಿ.ಬಿ.ಎಂ.ಪಿ. | ವಾರ್ಡ್‌ನ ನೋಡಲ್ ಅಧಿಕಾರಿ | [signature] 04/09/2021 |
| 2 | ಶ್ರೀ ಸತೀಶ್ ಕುಮಾರ್<br>ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ: 136<br>ಬಿ.ಬಿ.ಎಂ.ಪಿ ದೂ. 9986740382 | ಸದಸ್ಯ ಕಾರ್ಯದರ್ಶಿ | Sathish Kumar |
| 3 | ಎನ್. ಲಕ್ಷ್ಮಿ ನರಸಿಂಹಯ್ಯ ದೂ. 9845563157<br>ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ -136 | ಸದಸ್ಯರು | [signature] |
| 4 | ಸಹಾಯಕ ಕಾರ್ಯಪಾಲಕ ಅಭಿಯಂತರರ(ಕಾಮಗಾರಿ)<br>ಜೆ.ಜೆ.ಆರ್ ನಗರ ಉಪ ವಿಭಾಗದ ಪ್ರತಿನಿಧಿ<br>ಶ್ರೀ ಬಾಬು (ಕೆಲಸ ಪರಿವೀಕ್ಷಕರು) 9342582372 | ಸದಸ್ಯರು | V. B. [signature] |
| 5 | ಆರೋಗ್ಯಾಧಿಕಾರಿಗಳು, ಚಾಮರಜಪೇಟೆ ವಿಭಾಗ ರವರ ಪ್ರತಿನಿಧಿ.<br>ಎನ್. ಲಕ್ಷ್ಮಿ ನರಸಿಂಹಯ್ಯ ದೂ. 9845563157 | ಸದಸ್ಯರು | [signature] |
| 6 | ಶ್ರೀ ಉಮೇಶ್<br>ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ<br>ಪ್ರತಿನಿಧಿ ದೂ. 873557760 | ಸದಸ್ಯರು | [signature] |
| 7 | ಶ್ರೀ ಮೊಹಮದ್ ಮುಜಾಮೀಲ್<br>ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ<br>ಪ್ರತಿನಿಧಿ ದೂ. 7349649906 | ಸದಸ್ಯರು | [signature] |
| 8 | ಶ್ರೀಮತಿ ಚಂದ್ರಕಲಾ ದೂ. 8904845720<br>ಕಂದಾಯ ಪರಿವೀಕ್ಷಕರು, ವಾರ್ಡ್ ನಂ. 136 | ಸದಸ್ಯರು | [signature] |
| 9 | ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ) ರವರ<br>ಪ್ರತಿನಿಧಿಎನ್ ಎನ್. ಲಕ್ಷ್ಮಿ ನರಸಿಂಹಯ್ಯ<br>ದೂ. 9845563157 | ಸದಸ್ಯರು | |
| 10 | ಸಹಾಯಕ ಕಾರ್ಯಪಾಲಕ ಅಭಿಯಂತರರ<br>( ಬಿಡಬ್ಲೂ.ಎಸ್.ಎಸ್.ಬಿ) ರವರ ಪ್ರತಿನಿಧಿ 9731109258<br>ಕುಮಾರ ಸ್ವಾಮಿ. ದೂ. 9060341644 | ಸದಸ್ಯರು | [signature] (W.I) |
| 11 | ಸಹಾಯಕ ಕಾರ್ಯ ಪಾಲಕ ಅಭಿಯಂಣತರರು(ಬೆಸ್ಕಂ) ರವರ<br>ಪ್ರತಿನಿಧಿ | ಸದಸ್ಯರು | [signature] |
| 12 | ಮಾಗಡಿ ರಸ್ತೆ ಸಂಚಾರ ಪೋಲೀಸ್ ಠಾಣೆ ಯ ಪ್ರತಿನಿಧಿ<br>ಶ್ರೀ ರಾಮಚಂದ್ರ ಎ. ಎ.ಎಸ್.ಐ ದೂ.9902992624 | ಸದಸ್ಯರು 9901472437 | [signature] 4/08/09 |
| 13 | ಜೆ.ಜೆ.ಆರ್ ನಗರ ಪೋಲೀಸ್ ಠಾಣೆ ಯ ಪ್ರತಿನಿಧಿ | ಸದಸ್ಯರು | [signature] |

[signature] Sathish Kumar
ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ 136
ವಾರ್ಡ್ ಹಂತದ ಸಮಿತಿ

[signature] 04/09/2021
ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿ
ವಾರ್ಡ್ ಹಂತದ ಸಮಿತಿ, ವಾರ್ಡ್ ನಂ. 136